Karnatak Law Society's
**Vishwanathrao Deshpande Institute of Technology**
**(Approved by AICTE, New Delhi. Affiliated to VTU, Belagavi)**
**(Recognised Under Section 2(f) by UGC, New Delhi)**
**Udyog Vidya Nagar, Haliyal – 581329, Dist: Uttar Kannada (Karnataka)**
**Phone: 08284-220861, 220334, 221409, Fax: 08284-220813**
**www.klsvdit.edu.in** **principal@klsvdit.edu.in**

Date: 21-06-2022

**ಪತ್ರಿಕಾ ಪ್ರಕಟಣೆ**

## ವಿಶ್ವ ಯೋಗ ದಿನ ಆಚರಣೆ

ಕೆ.ಎಲ್.ಎಸ್ ವಿ.ಡಿ.ಐ.ಟಿ ಹಳಿಯಾಳದಲ್ಲಿ 21–06–2022 ರಂದು ವಿಶ್ವ ಯೋಗ ದಿನಾಚರಣೆ ಆಚರಿಸಲಾಯಿತು. ಬೆಳಿಗ್ಗೆ 8 ಗಂಟೆಗೆ ಮಹಾವಿದ್ಯಾಲಯದ ಸಭಾಂಗಣದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಪ್ರಾಂಶುಪಾಲರಾದ ಡಾ. ವಿ. ಎ. ಕುಲಕರ್ಣಿ ಅವರು ಮಾತನಾಡುತ್ತ ಯೋಗ ಭಾರತವು ಜಗತ್ತಿಗೆ ನೀಡಿದ ಅಭೂತಪೂರ್ವ ಕೊಡುಗೆಯಾಗಿದ್ದು, ಇತ್ತೀಚಿನ ದಿನಗಳಲ್ಲಿ ವಿಶ್ವದಾದ್ಯಂತ ಜನರು ದೈಹಿಕ ಮತ್ತು ಮಾನಸಿಕ ಆರೋಗ್ಯಕ್ಕಾಗಿ ಯೋಗದ ಮೊರೆ ಹೋಗುತ್ತಿದ್ದಾರೆ ಎಂದು ನುಡಿದರು.

60ಕ್ಕೂ ಹೆಚ್ಚು ವಿದ್ಯಾರ್ಥಿಗಳು ಈ ಸಂದರ್ಭದಲ್ಲಿ ಯೋಗ ಮತ್ತು ಪ್ರಾಣಾಯಾಮವನ್ನು ಸಾಮೂಹಿಕವಾಗಿ ಕೈಗೊಂಡರು. ವಿದ್ಯಾರ್ಥಿನಿಯಾದ ದಿವ್ಯಾ ಪಡವಲಕರ್ ನಿರೂಪಿಸಿದರು. ಮಹಾವಿದ್ಯಾಲಯದ ಆಡಳಿತ ವಿಭಾಗ ಮುಖ್ಯಸ್ಥರಾದ ಪ್ರೊ. ಮಂಜುನಾಥ ಡಿ, ಎನ್ ಎಸ್. ಎಸ್ ಘಟಕ ಸಂಚಾಲಕರಾದ ಪ್ರೊ. ವಿ. ಎಂ. ಚೌಗುಲಾ, ದೈಹಿಕ ಶಿಕ್ಷಣ ನಿರ್ದೇಶಕರಾದ ಶ್ರೀ. ಗದಿಗೆಪ್ಪಾ ಯಲ್ಲೂರ್ ಮತ್ತು ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

ಪ್ರಾಂಶುಪಾಲರು
Principal
KLS Vishwanathrao Deshpande
Institute of Technology, Haliyal



